RNU AIR DHARWAD

# MARCH 11,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

ರಾಜ್ಯದ ರೈತರ ಕೃಷಿ ಪಂಪ್ ಸೆಟ್‌ಗಳಿಗೆ, ದಿನದಲ್ಲಿ ಏಳು ತಾಸು, ಥ್ರೀ ಫೇಸ್ ವಿದ್ಯುತ್ ಒದಗಿಸಲು, ಸರ್ಕಾರ ಬದ್ಧವಾಗಿದೆ ಎಂದು, ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ. ವಿಧಾನ ಪರಿಷತ್ತಿನ ಪ್ರಶ್ನೋತ್ತರ ವೇಳೆಯಲ್ಲಿ, ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಸಚಿವರು, ತಾಂತ್ರಿಕ ಕ್ಷಮತೆ ಇರುವ, ವಿದ್ಯುತ್ ಉಪ ಕೇಂದ್ರಗಳಿಂದ, ಹಗಲಿನ ವೇಳೆಯಲ್ಲಿಯೇ, ನಿರಂತರ 7 ಗಂಟೆಗಳ ಕಾಲ, ಥ್ರೀ ಫೇಸ್ ವಿದ್ಯುತ್ತ ಸರಬರಾಜು ಮಾಡಲಾಗುತ್ತಿದೆ. ಉಳಿದೆಡೆ, ಹಗಲು 4 ಗಂಟೆ ಹಾಗೂ ರಾತ್ರಿ 3 ಗಂಟೆಗಳ ಕಾಲ, ವಿದ್ಯುತ್ ಒದಗಿಸಲಾಗುತ್ತಿದೆ ಎಂದರು.

<><><>

ಕರ್ನಾಟಕ ಸಾಹಿತ್ಯ ಅಕಾದೆಮಿಯು 2023 ರ ವಾರ್ಷಿಕ ಗೌರವ ಪ್ರಶಸ್ತಿ, ಸಾಹಿತ್ಯ ಶ್ರೀ ಪ್ರಶಸ್ತಿ ಹಾಗೂ ಪುಸ್ತಕ ಬಹುಮಾನ ಪ್ರಶಸ್ತಿಗಳನ್ನು ಘೋಷಿಸಿದೆ. 'ಸಾಹಿತ್ಯ ಶ್ರೀ' ಪ್ರಶಸ್ತಿಗೆ ಭಾಜನರಾದ ಸಾಹಿತಿ, ಧಾರವಾಡದ ಪ್ರೊಫೆಸರ್ ನಿಜಲಿಂಗಪ್ಪ ಮಟ್ಟಿಹಾಳ ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಬೈಟ್:ನಿಜಲಿಂಗಪ್ಪ ಮಟ್ಟಿಹಾಳ 37 ಸೆಕೆಂದುಗಳು

<><><>

ಡಾಕ್ಟರ್ ಮಲ್ಲಿಕಾರ್ಜುನ ಮನಸೂರ ಅವರು ಸಂಗೀತ ಲೋಕದ ದಿಗ್ಗಜರಾಗಿ, ಸುಮಾರು 6 ದಶಕಗಳ ಕಾಲ, ಸಂಗೀತದ ಸ್ವರ ಮಾಧುರ್ಯವನ್ನು ದೇಶದೆಲ್ಲೆಡೆ ಪಸರಿಸಿದ ಮಹನೀಯರು ಎಂದು ಬಾಲ ವಿಕಾಸ ಅಕಾದೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು. ಧಾರವಾಡದ, ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ, ಡಾಕ್ಟರ್ ಮಲ್ಲಿಕಾರ್ಜುನ ಮನಸೂರ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಕೊಡಮಾಡುವ ರಾಷ್ಟ್ರೀಯ ಪ್ರಶಸ್ತಿ ಹಾಗೂ ಯುವ ಪ್ರಶಸ್ತಿ ಪ್ರದಾನಿಸಿ ಮಾತನಾಡಿದರು. 2024-25 ನೇ ಸಾಲಿನ ಡಾ. ಮಲ್ಲಿಕಾರ್ಜುನ ಮನಸೂರ ರಾಷ್ಟ್ರೀಯ ಪ್ರಶಸ್ತಿಯನ್ನು ಗಾಯಕ ಪಂಡಿತ ಡಿ. ಕುಮಾರದಾಸ್ ಹಾಗೂ ಯುವ ಪ್ರಶಸ್ತಿಯನ್ನು ವಿನಾಯಕ ಹೆಗಡೆ ಅವರಿಗೆ ಪ್ರದಾನ ಮಾಡಲಾಯಿತು.

<><><>

10 ಸಾವಿರ ಕ್ವಿಂಟಾಲ್  ತೊಗರಿ, ಬೆಂಬಲ ಬೆಲೆ ಖರೀದಿ ಕೇಂದ್ರಕ್ಕೆ ಆವಕವಾಗುವ ನಿರೀಕ್ಷೆ ಇದೆ ಎಂದು, ಚಿತ್ರದುರ್ಗ ಶಾಸಕ ರಘು ಮೂರ್ತಿ, ಹೇಳಿದ್ದಾರೆ.  ಚಳ್ಳಕೆರೆ ತಾಲೂಕಿನ, ಎ.ಪಿ.ಎಂ.ಸಿ. ಮಾರುಕಟ್ಟೆಯಲ್ಲಿ, ಬೆಂಬಲ ಬೆಲೆ ತೊಗರಿ ಖರೀದಿ ಕೇಂದ್ರಕ್ಕೆ. ಚಾಲನೆ ನೀಡಿ, ಅವರು ಮಾತನಾಡಿದರು. ಪ್ರತಿ ಕ್ವಿಂಟಾಲ್ ತೊಗರಿಗೆ, ಕೇಂದ್ರ ಸರ್ಕಾರ 7 ಸಾವಿರದ 5 ನೂರಾ 50 ರೂಪಾಯಿ ನಿಗದಿ ಪಡಿಸಿದೆ. ರಾಜ್ಯ ಸರಕಾರ ಪ್ರೋತ್ಸಾಹ ಧನವಾಗಿ, ಪ್ರತಿ ಕ್ವಿಂಟಾಲ್‌ಗೆ, 450 ರೂಪಾಯಿ ನೀಡುತ್ತಿದೆ. ರೈತರಿಗೆ 2 ಸಾವಿರ ರೂಪಾಯಿ  ಲಾಭವಾಗಲಿದೆ, ಎಂದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾವೇರಿ ನಿವಾಸದಲ್ಲಿ, 16ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ, ಜೀವಮಾನ ಸಾಧನೆ ಪ್ರಶಸ್ತಿಯನ್ನು, ನಟಿ ಶಬಾನಾ ಆಜ್ಮಿ ಅವರಿಗೆ ನೀಡಿ ಗೌರವಿಸಿದರು.

<><><>

ಕೋಲಾರ ನಗರದ ವಿವಿಧ ಇಲಾಖೆಗಳು ಹಾಗೂ ಎಪಿಎಂಸಿ ಮಾರುಕಟ್ಟೆಗೆ ಆಗಮಿಸಿದ ಉಪ ಲೋಕಾಯುಕ್ತ ಬೀ.ವೀರಪ್ಪ ಅವರು ಪರಿಶೀಲನೆ ನಡೆಸಿದರು. ಎಪಿಎಂಸಿ ಗೆ ಬರುವ ರೈತರಿಗೆ ಮೂಲಭೂತ ಸೌಕರ್ಯಗಳ ಕೊರತೆಯಿದ್ದು, ಅಗತ್ಯ ಸೌಲಭ್ಯಗಳನ್ನು ಕಾಲಮಿತಿಯೊಳಗೆ ಪೂರೈಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು. ಯಾವುದೇ ಕಾರಣಕ್ಕೂ ರೈತರಿಗೆ ಅನ್ಯಾಯವಾಗಬಾರದು, ಎಪಿಎಂಸಿಯಲ್ಲಿನ ತೂಕದ ತಕ್ಕಡಿಗಳಲ್ಲಿ ಅಲ್ಪ ವ್ಯತ್ಯಾಸವಿರುವ ವಿಷಯವನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದರು.

<><><>

ರಾಮನಗರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ಕರ್ನಾಟಕ ಲೋಕಾಯುಕ್ತರಿಂದ ಜಿಲ್ಲಾ ಮಟ್ಟದ ಕುಂದುಕೊರತೆ ನಿವಾರಣೆ, ದೂರುಗಳ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ, ಕಾರ್ಯಕ್ರಮಕ್ಕೆ ರಾಜ್ಯ ಉಪ ಲೋಕಾಯುಕ್ತ, ನ್ಯಾಯಮೂರ್ತಿ ಕೆ.ಎನ್ ಫಣೀಂದ್ರ ಚಾಲನೆ ನೀಡಿದರು.

<><><>

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸದುಪಯೋಗವು ಅರ್ಹ ಫಲಾನುಭವಿಗಳಿಗೆ ದೊರಕಬೇಕು, ಅಧಿಕಾರಿಗಳು ಗ್ಯಾರಂಟಿ ಯೋಜನೆಗಳ ಪ್ರಗತಿಯ ನಿಖರ ವರದಿಯನ್ನು ಒದಗಿಸಬೇಕು ಎಂದು ಗದಗ ತಾಲೂಕು, ಪಂಚ ಗ್ಯಾರೆಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು.  ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಜರುಗಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

<><><>

ಹಾಸನದಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ಪತ್ತೆ ಹಚ್ಚಿ ಪುನರ್ವಸತಿ ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ತಂಡ ರಚಿಸಿ, ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸುವಂತೆ ಜಿಲ್ಲಾಧಿಕಾರಿ ಸತ್ಯಭಾಮ ಸೂಚಿಸಿದ್ದಾರೆ.

<><><>

ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ, ಮರಣಾನಂತರ ದೇಹದಾನ ಮಾಡಲು, ಆರು ಜನ ವಾಗ್ದಾನ ಮಾಡಿದ್ದಾರೆ.

<><><>

ಕಲಬುರಗಿಯಲ್ಲಿ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಸಹಿತ ಸಾಮಾಜಿಕ ಭದ್ರತಾ ಯೋಜನೆಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ, ನಾಳೆ ಮೆಗಾ ಲಾಗ್ ಇನ್ ಕಾರ್ಯಕ್ರಮ ಆಯೋಜಿಸಲಾಗಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..